# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

ಸಂಖ್ಯೆ: ಬಿ12(6)ಪಿಆರ್/254/23-24

ಆಯುಕ್ತರವರ ಕಛೇರಿ
ಬೃಹತ್ ಮಹಾನಗರ ಪಾಲಿಕೆ ಕಛೇರಿಗಳು,
ಬೆಂಗಳೂರು, ದಿನಾಂಕ: 27. 2. 24.

ಮುಖ್ಯ ಆಯುಕ್ತರ ಕಛೇರಿ
(ಮಾನ್ಯ ಆಯುಕ್ತರು) ಶಾಖೆ ಕಛೇರಿ
ಸಂಖ್ಯೆ: 1494
ದಿನಾಂಕ: 02/03/2024
ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

**ಕಛೇರಿ ಆದೇಶ**

ವಿಷಯ: ಶ್ರೀ ಕೆ. ಎಂ. ಯಧುಕೃಷ್ಣ, ಸಹಾಯಕ ಕಾರ್ಯನಿರ್ವಾಹಕ ಅಭಿಯಂತರರು ಇವರನ್ನು ಪಾಲಿಕೆಯ ಸೇವೆಯಿಂದ ಬಿಡುಗಡೆ ಮಾಡುವ ಬಗ್ಗೆ.

ಉಲ್ಲೇಖ: 1) ಸರ್ಕಾರದ ಲೋಕೋಪಯೋಗಿ ಇಲಾಖೆಯ ಅಧಿಸೂಚನೆ ಸಂಖ್ಯೆ: ಲೋಇ 59 ಸೇ.ಸ.ಎ 2022 ದಿನಾಂಕ: 02-01-2024

2) ಸರ್ಕಾರದ ನಗರಾಭಿವೃದ್ಧಿ ಇಲಾಖೆಯ ನಿಯೋಜನಾ ನೀತಿ ಆದೇಶ ಸಂಖ್ಯೆ: ನಅಇ 142 ಎಂ.ಎನ್.ಯು 2021, ದಿನಾಂಕ: 07-01-2022

----------

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ ಉಲ್ಲೇಖ-(1)ರ ಸರ್ಕಾರದ ಲೋಕೋಪಯೋಗಿ ಇಲಾಖೆಯ ಅಧಿಸೂಚನೆಯಲ್ಲಿ ಶ್ರೀ ಕೆ. ಎಂ. ಯಧುಕೃಷ್ಣ, ಸಹಾಯಕ ಕಾರ್ಯಪಾಲಕ ಅಭಿಯಂತರರು, (ಜೆ.ಸಂ.6054ಎ), ಲೋಕೋಪಯೋಗಿ ಇಲಾಖೆಯಿಂದ ಎರವಲು ಸೇವೆಯ ಮೇಲೆ ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಗೆ ನಿಯೋಜನೆಗೊಂಡು ಹಾಲಿ ಮುಖ್ಯ ಅಭಿಯಂತರರು (ಗುಣನಿಯಂತ್ರಣ / ಗುಣಭರವಸೆ) ಕಛೇರಿಯಲ್ಲಿ ಕಾರ್ಯನಿರ್ವಹಿಸುತ್ತಿರುವ ಇವರಿಗೆ ಇವರಿಗೆ ದಿನಾಂಕ: 24-03-2023ರಿಂದಲೇ ಜಾರಿಗೆ ಬರುವಂತೆ ಪೂರ್ವಾನ್ವಯವಾಗಿ ಕಾರ್ಯಪಾಲಕ ಅಭಿಯಂತರರ ಹುದ್ದೆಗೆ ಮುಂಬಡ್ತಿ ನೀಡಿ, ಮುಂದಿನ ಸ್ಥಳನಿಯುಕ್ತಿಗಾಗಿ ಸದರಿಯವರ ಸೇವೆಯನ್ನು ನಗರಾಭಿವೃದ್ಧಿ ಇಲಾಖೆಯ ವಶದಲ್ಲಿ ಮುಂದುವರೆಸಿ ಆದೇಶಿಸಿರುವುದರಿಂದ, ಸದರಿಯವರನ್ನು ತಕ್ಷಣದಿಂದ ಜಾರಿಗೆ ಬರುವಂತೆ ಈ ಕೆಳಕಂಡ ಷರತ್ತಿಗೊಳಪಡಿಸಿ, ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯ ಸೇವೆಯಿಂದ ಬಿಡುಗಡೆಗೊಳಿಸಿ ಆದೇಶಿಸಿದೆ.

**ಷರತ್ತುಗಳು:-**

1. ಸದರಿ ಅಭಿಯಂತರರು ನಗರ ಪಾಲಿಕೆಯ ಸೇವಾ ಅವಧಿಯಲ್ಲಿ ನಗರ ಪಾಲಿಕೆಗೆ ಯಾವುದೇ ಆರ್ಥಿಕ ಬಾಕಿಯನ್ನು ಉಳಿಸಿಕೊಂಡಿದ್ದಲ್ಲಿ ಸದರಿಯವರಿಂದ ವಸೂಲಾತಿ ಮಾಡುವ ಷರತ್ತಿಗೊಳಪಡಿಸಿದೆ.
2. ಸದರಿ ಅಭಿಯಂತರರ ವಿರುದ್ಧ ಇಲಾಖಾ ವಿಚಾರಣೆ ಬಾಕಿ ಇದ್ದಲ್ಲಿ ನಿಯಮಾನುಸಾರ ಕ್ರಮಜರುಗಿಸುವ ಷರತ್ತಿಗೊಳಪಡಿಸಿದೆ.
3. ಪಾಲಿಕೆಯ ಹಿಂದಿನ ವರ್ಷಗಳ ಆಡಿಟ್ ವರದಿಗಳಲ್ಲಿ ಯಾವುದೇ ಆರ್ಥಿಕ ಬಾಕಿಯನ್ನು ಸದರಿಯವರಿಂದ ವಸೂಲಾತಿ ಮಾಡಲು ಸೂಚಿಸಿದಲ್ಲಿ, ಅಂತಹ ಮೊತ್ತವನ್ನು ವಸೂಲಾತಿ ಮಾಡುವ ಷರತ್ತಿಗೊಳಪಡಿಸಿದೆ ಹಾಗೂ ಆಕ್ಷೇಪಣೆಗಳಿದ್ದಲ್ಲಿ ಅವುಗಳಿಗೆ ಸಮರ್ಪಕ ಉತ್ತರ ನೀಡುವ ಷರತ್ತು ವಿಧಿಸಿದೆ.
4. ಸದರಿಅಭಿಯಂತರರು ನಗರ ಪಾಲಿಕೆಯ ವಸತಿಗೃಹದಲ್ಲಿ ವಾಸಿಸುತ್ತಿದ್ದಲ್ಲಿ ಕೂಡಲೇ ತೆರವುಗೊಳಿಸುವ ಷರತ್ತಿಗೊಳಪಡಿಸಿದೆ.
5. ವಾಕಿ ಟಾಕಿ, ಮೊಬೈಲ್ ಪೋನ್, ಸಿಮ್‌ಕಾರ್ಡ್, ಹೆಲ್ಮ್ಯಾರ್ಡ್, ಗುರುತಿನ ಚೀಟಿ (Identity card) ಹಾಗೂ ಲ್ಯಾಪ್ ಟಾಪ್‌ಗಳನ್ನು ಪಾಲಿಕೆಯಿಂದ ಪಡೆದಿದ್ದಲ್ಲಿ ಇವುಗಳನ್ನು ಪಾಲಿಕೆಗೆ ಹಿಂದಿರುಗಿಸುವ ಷರತ್ತಿಗೊಳಪಡಿಸಿದೆ.

ಮೇಲ್ಕಂಡ ಆದೇಶದನ್ವಯ ಸಂಬಂಧಪಟ್ಟ ಬಟವಾಡೆ ಅಧಿಕಾರಿಗಳು ಅಗತ್ಯ ಕ್ರಮ ಕೈಗೊಳ್ಳುವುದು.

SDA 02/03/2024

27/2

(ಮಾನ್ಯ ಮುಖ್ಯ ಆಯುಕ್ತರು ರವರ ಆದೇಶದ ಮೇರೆಗೆ)

ಉಪ ಆಯುಕ್ತರು (ಆಡಳಿತ)
ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

26/2/2024 26/2/24

**ಪ್ರತಿಯನ್ನು :**

: ಮಾನ್ಯ ಆಡಳಿತಗಾರರು ರವರ ಅವಗಾಹನೆಗೆ ತರಲು ಆಪ್ತ ಶಾಖೆಗೆ ಕಳುಹಿಸಿದೆ.
: ಮಾನ್ಯ ಮುಖ್ಯ ಆಯುಕ್ತರು ರವರ ಅವಗಾಹನೆಗೆ ತರಲು ಆಪ್ತ ಶಾಖೆಗೆ ಕಳುಹಿಸಿದೆ
: ಮಾನ್ಯ ವಿಶೇಷ ಆಯುಕ್ತರು (ಯೋಜನೆ) / ವಿಶೇಷ ಆಯುಕ್ತರು (ಆಡಳಿತ) ರವರ ಅವಗಾಹನೆಗೆ ತರಲು ಆಪ್ತ ಶಾಖೆಗೆ ಕಳುಹಿಸಿದೆ.

........2

: ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಗಳು, ನಗರಾಭಿವೃದ್ಧಿ ಇಲಾಖೆ, ಕರ್ನಾಟಕ ಸರ್ಕಾರ, ಬೆಂಗಳೂರು ರವರಿಗೆ ಕಳುಹಿಸಿದೆ

: ಸರ್ಕಾರದ ಅಧೀನ ಕಾರ್ಯದರ್ಶಿಗಳು, ಲೋಕೋಪಯೋಗಿ ಬಂದರು ಮತ್ತು ಒಳನಾಡು ಜಲಸಾರಿಗೆ ಇಲಾಖೆ, ಬೆಂಗಳೂರು ರವರಿಗೆ ಕಳುಹಿಸಿದೆ.

: ಪ್ರಧಾನ ಅಭಿಯಂತ್ರರರು / ಮುಖ್ಯ ಅಭಿಯಂತರರು (ಗುಣನಿಯಂತ್ರಣ / ಗುಣಭರವಸೆ) ರವರಿಗೆ ಕಳುಹಿಸಿದೆ.

: ಉಪ ಮುಖ್ಯ ಮಾಹಿತಿ ಅಧಿಕಾರಿ, ಬಿ.ಬಿ.ಎಂ.ಪಿ ರವರಿಗೆ ಕಳುಹಿಸುತ್ತಾ, ಸದರಿಯವರು ಮೊಬೈಲ್ ಫೋನ್, ಮತ್ತು ಸಿಮ್ ಕಾರ್ಡ್ ಅನ್ನು ಪಾಲಿಕೆಗೆ ಹಿಂದಿರುಗಿಸಿರುವ ಬಗ್ಗೆ ದೃಢೀಕರಿಸಿಕೊಳ್ಳುವುದು.

: ಕಾರ್ಯಪಾಲಕಅಭಿಯಂತರರು (ಗುಣನಿಯಂತ್ರಣ / ಗುಣಭರವಸೆ) ವಿಭಾಗ ರವರಿಗೆ ಕಳುಹಿಸಿದೆ.

: ಮು.ಲೆ.ಅ / ಮು.ಲೆ.ಪ ರವರಿಗೆ ರವರಿಗೆ /ಉ.ನಿ (ಹಣಕಾಸು-ಕೇಂದ್ರ) ರವರಿಗೆ ಕಳುಹಿಸಿದೆ.

: ಸಂಬಂಧಪಟ್ಟ ಅಭಿಯಂತರರಿಗೆ / ಕಛೇರಿ ಪ್ರತಿ.